ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ : ಇಡಿ/ಕೆಇಎ/ನೇಮಕಾತಿಶಾಖೆ/ಸಿಆರ್-6079/2022-23 ದಿನಾಂಕ : 01.06.2024

# ಟಿಪ್ಪಣಿ

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಲ್ಲಿ ಖಾಲಿ ಇರುವ ವಿವಿಧ ವೃಂದದ ಬ್ಯಾಕ್ ಲಾಗ್ ಹುದ್ದೆಗಳಿಗೆ ನಿಗಮದಿಂದ ದಿನಾಂಕ: 17.08.2022 ರಂದು ವಿವರವಾದ ಅಧಿಸೂಚನೆಯನ್ನು ಹೊರಡಿಸಿ, ಸದರಿ ಹುದ್ದೆಗಳಿಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಪ್ರಾಧಿಕಾರದಿಂದ ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯನ್ನು ನಡೆಸಿಕೊಡುವಂತೆ ಕೋರಲಾಗಿರುತ್ತದೆ.

ಅದರಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು, ಪರೀಕ್ಷಾ ದಿನಾಂಕವನ್ನು ನಿಗದಿಗೊಳಿಸಿ ಮಾಹಿತಿಗಾಗಿ ಪ್ರಕಟಿಸಲಾಗಿದ್ದು, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಿಂದ ದಿನಾಂಕ: 31.01.2024 ರಂದು ಪ್ರಾಧಿಕಾರಕ್ಕೆ ಪತ್ರ ಬರೆದು, ಕರ್ನಾಟಕ ನಾಗರಿಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021 ರಲ್ಲಿ ನಿಗದಿಗೊಳಿಸಿರುವಂತೆ, ಪರೀಕ್ಷಾ ವಿಧಾನ ಹಾಗೂ ಪಠ್ಯಕ್ರಮವನ್ನು ಅಳವಡಿಸಿಕೊಳ್ಳುವಂತೆ ಕೋರಿರುವುವರಿಂದ, ಪರೀಕ್ಷಾ ಪ್ರಶ್ನೆ ಪತ್ರಿಕೆ ವಿಧಾನ ಹಾಗೂ ಪಠ್ಯಕ್ರಮದ ವಿವರಗಳು ಈ ಕೆಳಗಿನಂತಿದೆ.

## 1. ಸಹಾಯಕ ಲೆಕ್ಕಿಗ.

| ಪತ್ರಿಕೆ/ Paper | ವಿಷಯ / Subject | ಅಂಕಗಳು/ Marks | ಅವಧಿ / Duration (ಗಂಟೆ / hours) |
|---|---|---|---|
| ಪತ್ರಿಕೆ-1 | (ಎ) ಪ್ರಚಲಿತ ಘಟನೆಗಳಿಗೆ ಸಂಬಂಧಿಸಿದ ವಿಷಯಗಳ ಸಾಮಾನ್ಯ ಜ್ಞಾನ (ಬಿ) ಸಾಮಾನ್ಯ ವಿಜ್ಞಾನ ವಿಷಯಗಳು. (ಸಿ) ಭೂಗೋಳ ಶಾಸ್ತ್ರ ವಿಷಯಗಳು. (ಡಿ) ಸಮಾಜ ವಿಜ್ಞಾನ ವಿಷಯಗಳು. (ಇ) ಭಾರತೀಯ ಸಮಾಜ ಮತ್ತು ಅದರ ಬೆಳವಣಿಗೆಗಳ ಇತಿಹಾಸದ ವಿಷಯಗಳು. (ಎಫ್) ಭಾರತದ ಮತ್ತು ಕರ್ನಾಟಕ ಇತಿಹಾಸ. (ಜಿ) ಭಾರತದ ಸಂವಿಧಾನದ ಮತ್ತು ಸಾರ್ವಜನಿಕ ಆಡಳಿತ. (ಎಚ್) ಪ್ರಾಯೋಗಿಕ ಜ್ಞಾನ ಮತ್ತು ಬೌದ್ಧಿಕ ಸಾಮರ್ಥ್ಯದ ವಿಷಯಗಳು (ಎಸ್.ಎಸ್.ಎಲ್.ಸಿ ಮಟ್ಟದ) (ಐ) ಕರ್ನಾಟಕದ ಸಮಾಜಿಕ ಮತ್ತು ಸಾಂಸ್ಕೃತಿಕ ಇತಿಹಾಸದ ವಿಷಯಗಳು. (ಜೆ) ಸ್ವಾತಂತ್ರ್ಯ ನಂತರದಲ್ಲಿ ಕರ್ನಾಟಕದ ಭೂ ಸುಧಾರಣೆಗಳು ಮತ್ತು ಸಮಾಜಿಕ ಬದಲಾವಣೆಗಳ ವಿಷಯಗಳು. (ಕೆ) ಕರ್ನಾಟಕದ ಅರ್ಥವ್ಯವಸ್ಥೆ: ಅದರ ಸಾಮರ್ಥ್ಯ ಮತ್ತು ದೌರ್ಬಲ್ಯತೆ: ಪ್ರಸ್ತುತ ಸ್ಥಿತಿಗತಿ ಕುರಿತ ವಿಷಯಗಳು. (ಎಲ್) ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಸಂಸ್ಥೆಗಳ ಮತ್ತು ಗ್ರಾಮೀಣ ಸಹಕಾರ ಸಂಸ್ಥೆಗಳ ವಿಷಯಗಳು. (ಎಂ) ಕರ್ನಾಟಕ ಪರಿಣಾಮಕಾರಿ ಆಡಳಿತಕ್ಕಾಗಿ ವಿಜ್ಞಾನ ಮತ್ತು ತಂತ್ರಜ್ಞಾನದ ಪಾತ್ರ ಕುರಿತ ವಿಷಯಗಳು. (ಎನ್) ಕರ್ನಾಟಕದ ಪರಿಸರ ಸಂಬಂಧಿ ಸಮಸ್ಯೆಗಳು ಮತ್ತು ಅಭಿವೃದ್ಧಿ ಕುರಿತ ವಿಷಯಗಳು (ಓ) ಬೌದ್ಧಿಕ ಸಾಮರ್ಥ್ಯದ ವಿಷಯಗಳು. | 100 | 2 ಗಂಟೆ |
| ಪತ್ರಿಕೆ-2 | (ಎ) ಸಾಮಾನ್ಯ ಕನ್ನಡ (ಬಿ) ಸಾಮಾನ್ಯ ಇಂಗ್ಲೀಷ್ (ಸಿ) ಕಂಪ್ಯೂಟರ್ ಜ್ಞಾನ | 100 | 2 ಗಂಟೆ |

2. **ಸಹಾಯಕ ಸಂಚಾರ ನಿರೀಕ್ಷಕ / ಕ.ರಾ.ಸಾ. ಪೇದೆ / ಕುಶಲಕರ್ಮಿ ಮತ್ತು ತಾಂತ್ರಿಕ ಸಹಾಯಕ.**

| ಪತ್ರಿಕೆ/ Paper | ವಿಷಯ / Subject | ಅಂಕಗಳು/ Marks | ಅವಧಿ/Duration (ಗಂಟೆ / hours) |
|---|---|---|---|
| ಪತ್ರಿಕೆ–1 | (ಎ) ಪ್ರಚಲಿತ ಘಟನೆಗಳಿಗೆ ಸಂಬಂಧಿಸಿದ ಸಾಮಾನ್ಯ ಜ್ಞಾನದ ವಿಷಯಗಳು. (ಬಿ) ದೈನಂದಿನ ಗ್ರಹಿಕೆಯ ವಿಷಯಗಳು (ಸಿ) ಭಾರತದ ಸಂವಿಧಾನದ ಸ್ಥೂಲ ನೋಟದ ವಿಷಯಗಳು. (ಡಿ) ವಿಶೇಷವಾಗಿ ಕರ್ನಾಟಕ್ಕೆ ಸಂಬಂಧಿಸಿದ ಭಾರತದ ಇತಿಹಾಸ. (ಇ) ಕರ್ನಾಟಕ್ಕೆ ಸಂಬಂಧಿಸಿದಂತೆ ಭಾರತದ ಭೂಗೋಳ ವಿಷಯಗಳು. (ಎಫ್) ರಾಜ್ಯ ಮತ್ತು ಪ್ರಾದೇಶಿಕ ಆಡಳಿತ ಕುರಿತ ವಿಷಯಗಳು. (ಜಿ) ಗ್ರಾಮೀಣಾಭಿವೃದ್ಧಿ ಪಂಚಾಯತ್‌ರಾಜ್ ಸಂಸ್ಥೆಗಳು ಮತ್ತು ಗ್ರಾಮೀಣ ಸಹಕಾರ ಸಂಸ್ಥೆಗಳಿಗೆ ಸಂಬಂಧಿಸಿದ ಉಪಕ್ರಮಗಳನ್ನು ಒಳಗೊಂಡಂತೆ ಕರ್ನಾಟಕ ಆರ್ಥಿಕತೆಯ ಅಭಿವೃದ್ಧಿ ಕುರಿತ ವಿಷಯಗಳು. (ಎಚ್) ಕರ್ನಾಟಕದ ಪರಿಸರ ಸಂಬಂಧಿ ಸಮಸ್ಯೆಗಳು ಮತ್ತು ಅಭಿವೃದ್ಧಿ ಕುರಿತ ವಿಷಯಗಳು. | 100 | 2 ಗಂಟೆ |
| ಪತ್ರಿಕೆ–2 | (ಎ) ಸಾಮಾನ್ಯ ಕನ್ನಡ (ಬಿ) ಸಾಮಾನ್ಯ ಇಂಗ್ಲೀಷ್ (ಸಿ) ಕಂಪ್ಯೂಟರ್ ಜ್ಞಾನ. | 100 | 2 ಗಂಟೆ |

**ಸೂಚನೆ:**

1. **ಋಣಾತ್ಮಕ ಮೌಲ್ಯಮಾಪನ (Negative Valuation):–**

ಸ್ಪರ್ಧಾತ್ಮಕ ಪರೀಕ್ಷೆ ಪ್ರಶ್ನೆ ಪತ್ರಿಕೆಗಳಲ್ಲಿನ ಪ್ರತಿಯೊಂದು ಪ್ರಶ್ನೆಗೂ 04 ಪರ್ಯಾಯ ಉತ್ತರಗಳಿದ್ದು, ಅಭ್ಯರ್ಥಿಯು ಯಾವುದಾದರೂ ಒಂದು ಸರಿ ಉತ್ತರವನ್ನು ಮಾತ್ರ ಆಯ್ಕೆ ಮಾಡತಕ್ಕದ್ದು. ಪ್ರತಿ ತಪ್ಪು ಉತ್ತರಕ್ಕೆ ನಾಲ್ಕನೇ ಒಂದಂಶದಷ್ಟು (¼) ಅಂಕಗಳನ್ನು ಕಳೆಯಲಾಗುವುದು.

2. ಅಭ್ಯರ್ಥಿಗಳು ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯಲ್ಲಿ ನಿಗದಿಗೊಳಿಸಿದ ಅಂಕಗಳಲ್ಲಿ ಕನಿಷ್ಠ ಶೇಕಡಾ 30 ಅಂಕಗಳನ್ನು ಗಳಿಸಿ ಉತ್ತೀರ್ಣರಾಗಬೇಕು.

3. ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮವು ಪ್ರಕಟಿಸಲಾದ ವಿವರವಾದ ನೇಮಕಾತಿ ಅಧಿಸೂಚನೆಯಲ್ಲಿ ತಿಳಿಸಿರುವ ಎಲ್ಲಾ ಅರ್ಹತಾ ಷರತ್ತುಗಳು ಹಾಗೂ ಆಯ್ಕೆ ವಿಧಾನಗಳಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ.

ಕಾರ್ಯನಿರ್ವಾಹಕ ನಿರ್ದೇಶಕರು